**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 109/2018**

**ಸಾಕ್ಷಿಯನ್ನು ದಿನಾಂಕಃ 28.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಗಳ ಪರ ಶ್ರೀ. ಹೆಚ್.ಬಿ.ಎಂ. ವಕೀಲರಿಂದಃ**

ಈ ದಾವೆಯಲ್ಲಿ ನಾನು ವಾದಿ ನಂ. 1(ಬಿ) ಆಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

01 ಕೈ-ಬರಹದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, 02 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-2 ಮತ್ತು ನಿ.ಪಿ.-3** ಎಂದು, ಮ್ಯುಟೇಷನ್ ವಹಿಯ ಆದೇಶದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-4** ಎಂದು ಮತ್ತು ಋಣಭಾರ ರಾಹಿತ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-5** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿರುತ್ತಾರೆ. ಆದ್ದರಿಂದ ನ್ಯಾಯ ಮತ್ತು ಸಮಾನತೆ ದೃಷ್ಟಿಯಿಂದ ಪಾಟೀ ಸವಾಲಿಗಾಗಿ ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**